## ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
## KARNATAKA LEGISLATIVE ASSEMBLY, RESEARCH AND REFERENCE BRANCH

### ಪತ್ರಿಕಾ ತುಣುಕುಗಳು
### PAPER CLIPPINGS

8

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 21/9/2020

# 3 ದಿನಕ್ಕೆ ಅಧಿವೇಶನ ಮೊಟಕಿಗೆ ಹುನ್ನಾರ

**ಬೆಂಗಳೂರು:** ಕೊರೊನಾ ಹಿನ್ನೆಲೆಯಲ್ಲಿ ವಿಧಾನಮಂಡಲ ಅಧಿವೇಶನವನ್ನು ಮೂರೇ ದಿನದಲ್ಲಿ ಮೊಟಕು ಮಾಡಲು ಸರ್ಕಾರ ಉದ್ದೇಶಿಸಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕೊರೊನಾ ಹೆಸರು ಹೇಳಿಕೊಂಡು ವಿಧಾನಮಂಡಲ ಅಧಿವೇಶನವನ್ನು ಕೇವಲ ಮೂರೇ ದಿನಕ್ಕೆ ಮೊಟಕುಗೊಳಿಸಲು ಯಡಿಯೂರಪ್ಪ ನಿರ್ಧರಿಸಿದ್ದು ಇದಕ್ಕೆ ನಾವು ಅವಕಾಶ ಕೊಡುವುದಿಲ್ಲ ಎಂದು ಹೇಳಿದರು.

ಅಧಿವೇಶನದ ವಿಷಯವಾಗಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ನನಗೆ ಹಾಗೂ ಸಿದ್ದರಾಮಯ್ಯ ಅವರಿಗೆ ದೂರವಾಣಿ ಕರೆ ಮಾಡಿ ಕೊರೊನಾ ಆರ್ಭಟ ಹಿನ್ನೆಲೆಯಲ್ಲಿ ಅಧಿವೇನವನ್ನು ಮೂರು ದಿನಕ್ಕೆ ಮೊಟಕು ಮಾಡಲಾಗುತ್ತಿದೆ. ಇದಕ್ಕೆ ಸಹಕಾರ ಕೊಡಬೇಕೆಂದ ಅವರು. ಆದರೆ. ಇದಕ್ಕೆ ನಾವು ಅವಕಾಶ ನೀಡುವುದಿಲ್ಲ. ಬಿಜೆಪಿ ಪ್ರಜಾಪ್ರಭುತ್ವ ಮುಗಿಸಲು ಹೊರಟಿದೆ. ರಾಜ್ಯದಲ್ಲಿ ಬರ, ನೆರೆ ಕಾನೂನು ಸುವ್ಯವಸ್ಥೆ ಹದೆಗಟ್ಟಿದೆ. ಕೇಂದ್ರ ಪರಿಹಾರ ಕೊಡುತ್ತಿಲ್ಲ ಇದೆಲ್ಲ ಚರ್ಚೆ ಮಾಡಬೇಕಿದೆ. ಅಧಿವೇಶನವನ್ನು ಮೊಟಕು ಮಾಡುವಂತೆ ಪ್ರಧಾನಿ ನರೇಂದ್ರ ಮೋದಿ ಅವರೇ ಸೂಚನೆ ಕೊಟ್ಟಿದ್ದಾರಂತೆ ಎಂದು ಆರೋಪ ಮಾಡಿದರು.